# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1170 |
| ಮಾನ್ಯ ಸದಸ್ಯರ ಹೆಸರು | : | ಡಾ:ಎಂ.ಜಿ.ಮುಳೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.12.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕುಮಾರ ಕೃಪಾ ಅತಿಥಿ ಗೃಹವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರು ನಿರ್ವಹಿಸದೆ, ಪ್ರವಾಸೋದ್ಯಮ ಇಲಾಖೆಗೆ ನೀಡಿರುವುದು ನಿಜವೇ? ನೀಡಿದ್ದರೆ, ಅದಕ್ಕೆ ಕಾರಣವೇನು? | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಕರಾರು ಒಪ್ಪಂದದನ್ವಯ ಕುಮಾರ ಕೃಪ ಅತಿಥಿ ಗೃಹದ ರೆಸ್ಟೋರೆಂಟ್ ಹಾಗೂ ಹೌಸ್ ಕೀಪಿಂಗ್ ನಿರ್ವಹಣೆಯನ್ನು ಮಾತ್ರ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ನಿರ್ವಹಿಸುತ್ತಿದೆ. |
| ಆ) | ಅತಿಥಿ ಕೊಠಡಿಗಳನ್ನು ಪಡೆಯುವುದಕ್ಕೆ ಆನ್‌ಲೈನ್ ವ್ಯವಸ್ಥೆಯನ್ನು ಮಾಡುವ ಯೋಚನೆ ಸರ್ಕಾರದ ಮುಂದೆ ಇದೆಯೇ? | ಅನ್ವಯಿಸುವುದಿಲ್ಲ. |
| ಇ) | ಅತಿಥಿ ಗೃಹದಲ್ಲಿರುವ ಕ್ಯಾಂಟೀನ್‌ನನ್ನು ಮಧ್ಯಾಹ್ನ 2 ಗಂಟೆಯಿಂದ 5.30 ರವರೆಗೆ ಮುಚ್ಚಿಡುವುದರಿಂದ ರಾಜ್ಯಕ್ಕೆ ಆಗಮಿಸುವ ಅತಿಥಿಗಳಿಗೆ ತೊಂದರೆಯಾಗುತ್ತಿರುವುದು ನಿಜವೇ? | ಅತಿಥಿ ಗೃಹದಲ್ಲಿರುವ ಕ್ಯಾಂಟೀನ್ ಪರಿಸರ ಹಾಗೂ ಅತಿಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲು ಕರಾರು ಒಪ್ಪಂದದ ಷರತ್ತು ಮತ್ತು ನಿಬಂಧನೆಯಲ್ಲಿ ತಿಳಿಸಿರುವಂತೆ, ಸಂಜೆ 4 ಗಂಟೆಯಿಂದ 5.30ರವರೆಗೆ ವಿರಾಮ ನೀಡಲಾಗಿರುತ್ತದೆ. |
| ಈ) | ನಿಜವಾಗಿದ್ದಲ್ಲಿ, ಅದಕ್ಕೆ ಕೈಗೊಳ್ಳುವ ಕ್ರಮಗಳೇನು? | |

ಸಂಖ್ಯೆ: TOR 311 TDV 2024

(ಎಚ್.ಕೆ. ಪಾಟೀಲ್)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು